**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 81 ಸೇವನೆ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ: 27.02.2018

**ಸುತ್ತೋಲೆ**

ವಿಷಯ: ಎಸ್.ಎಸ್.ಎಲ್.ಸಿ., ಪಿ.ಯು.ಸಿ. ಮತ್ತು ಪದವಿ ವಿದ್ಯಾರ್ಹತೆಗಳ ತತ್ಸಮಾನ ವಿದ್ಯಾರ್ಹತೆ/ಕೋರ್ಸುಗಳ ಬಗ್ಗೆ ಸ್ಪಷ್ಟೀಕರಣ

****

ಕರ್ನಾಟಕ ಸಿವಿಲ್ ಸೇವಾ (ಲಿಪಿಕ ಹುದ್ದೆಗಳ ನೇಮಕಾತಿ) ನಿಯಮಗಳು, 1978ರ ನಿಯಮ 4 ರಲ್ಲಿ ಕಿರಿಯ ಸಹಾಯಕ/ದ್ವಿತೀಯ ದರ್ಜೆ ಸಹಾಯಕರ ಹುದ್ದೆಯ ನೇರ ನೇಮಕಾತಿಗೆ "ಪದವಿಪೂರ್ವ ಶಿಕ್ಷಣ ಅಥವಾ ಅದರ ತತ್ಸಮಾನ ವಿದ್ಯಾರ್ಹತೆ" ಯನ್ನು ಹಾಗೂ ಸಹಾಯಕ/ಪ್ರಥಮ ದರ್ಜೆ ಸಹಾಯಕರ ಹುದ್ದೆಯ ನೇರ ನೇಮಕಾತಿಗೆ "ಬ್ಯಾಚುಲರ್ ಪದವಿ ಅಥವಾ ಅದರ ತತ್ಸಮಾನ ವಿದ್ಯಾರ್ಹತೆ" ಯನ್ನು ವಿದ್ಯಾರ್ಹತೆಯನ್ನಾಗಿ ನಿಗದಿಪಡಿಸಲಾಗಿದೆ. ತದನಂತರ, ಪಿ.ಯು.ಸಿ. ವಿದ್ಯಾರ್ಹತೆಯ ತತ್ಸಮಾನ ವಿದ್ಯಾರ್ಹತೆಗಳು ಯಾವುವು ಎಂಬ ಬಗ್ಗೆ ಹಲವು ಇಲಾಖೆಗಳಿಂದ ಸ್ಪಷ್ಟೀಕರಣ ಕೋರಿ ಮನವಿಗಳು ಸ್ವೀಕೃತವಾಗುತ್ತಿದ್ದ ಹಿನ್ನೆಲೆಯಲ್ಲಿ, ಎಸ್.ಎಸ್.ಎಲ್.ಸಿ. ನಂತರ ಪದವಿಪೂರ್ವ ಶಿಕ್ಷಣಕ್ಕೆ ಬದಲಾಗಿ ಐ.ಟಿ.ಐ ಮತ್ತು ಇತರೆ ಮೂರು ವರ್ಷದ ಡಿಪ್ಲೊಮಾ ಕೋರ್ಸನ್ನು ಪದವಿಪೂರ್ವ ಶಿಕ್ಷಣಕ್ಕೆ(ಪಿ.ಯು.ಸಿ.ಗೆ) ತತ್ಸಮಾನವೆಂದು ನೇಮಕಾತಿಯಲ್ಲಿ ಪರಿಗಣಿಸಬಹುದೆಂದು ಹಾಗೂ ಮುಕ್ತ ವಿಶ್ವವಿದ್ಯಾಲಯಗಳು ನಡೆಸುವ 10+2 ಪರೀಕ್ಷೆಯನ್ನು ನೇಮಕಾತಿಗೆ ಪರಿಗಣಿಸಬಾರದೆಂದು ಸುತ್ತೋಲೆ ಸಂಖ್ಯೆ: ಸಿಆಸುಇ 147 ಸೇಅನೇ 2014 ದಿನಾಂಕ: 27.01.2015 ರಲ್ಲಿ ಸೂಚಿಸಲಾಗಿತ್ತು. ಆ ನಂತರವೂ ಹಲವು ತತ್ಸಮಾನತೆಯ ಕೋರ್ಸುಗಳ ಬಗ್ಗೆ ಮನವಿಗಳು ಸ್ವೀಕೃತವಾಗುತ್ತಿರುವುದರಿಂದ ದಿನಾಂಕ: 27.01.2015 ರ ಸುತ್ತೋಲೆಯನ್ನು ಮರುಪರಿಶೀಲಿಸಲಾಗಿದೆ. ಅಲ್ಲದೆ, ಇತ್ತೀಚೆಗೆ ಪದವಿ ವಿದ್ಯಾರ್ಹತೆಯ ತತ್ಸಮಾನ ವಿದ್ಯಾರ್ಹತೆಗಳ ಬಗ್ಗೆಯೂ ಸ್ಪಷ್ಟೀಕರಣ ಕೋರಿ ಹಲವು ಮನವಿಗಳು ಸ್ವೀಕೃತವಾಗುತ್ತಿವೆ.

2) ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 5ರಲ್ಲಿ ಗ್ರೂಪ್ 'ಡಿ' ಹುದ್ದೆಯ ನೇಮಕಾತಿಗೆ "ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆ"ಯನ್ನು ವಿದ್ಯಾರ್ಹತೆಯನ್ನಾಗಿ ನಿಗದಿಪಡಿಸಲಾಗಿದೆ. ತತ್ಪರಿಣಾಮವಾಗಿ, ಎಸ್.ಎಸ್.ಎಲ್.ಸಿ ವಿದ್ಯಾರ್ಹತೆಯ ತತ್ಸಮಾನ ವಿದ್ಯಾರ್ಹತೆ/ಕೋರ್ಸ್‌ಗಳ ಬಗ್ಗೆಯೂ ಸ್ಪಷ್ಟೀಕರಣ ಕೋರಿಕೆಗಳು ಸ್ವೀಕೃತವಾಗುತ್ತಿವೆ.

2...

(Admin & Academic)

C-18798

Aa-756

3) ಮೇಲ್ಕಂಡ ಹಿನ್ನೆಲೆಯಲ್ಲಿ, ಈ ಬಗ್ಗೆ ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡ ವಿದ್ಯಾರ್ಹತೆ/ ಕೋರ್ಸುಗಳನ್ನು ಎಸ್.ಎಸ್.ಎಲ್.ಸಿ., ಪಿ.ಯು.ಸಿ. ಮತ್ತು ಪದವಿ ವಿದ್ಯಾರ್ಹತೆಯ ತತ್ಸಮಾನ ವಿದ್ಯಾರ್ಹತೆ/ ಕೋರ್ಸುಗಳೆಂದು ಸ್ಪಷ್ಟಪಡಿಸಲಾಗಿದೆ:-

**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ವಿದ್ಯಾರ್ಹತೆಯ ತತ್ಸಮಾನ ವಿದ್ಯಾರ್ಹತೆಗಳು**

1. ಸಿ.ಬಿ.ಎಸ್.ಇ. ಮತ್ತು ಐ.ಸಿ.ಎಸ್.ಇ., ಮಂಡಳಿಯು ನಡೆಸುವ ಕ್ಲಾಸ್ 10 ಪರೀಕ್ಷೆ
2. ಇತರೆ ರಾಜ್ಯ ಸರ್ಕಾರದ ಪರೀಕ್ಷಾ ಮಂಡಳಿಗಳಿಂದ ನಡೆಸುವ ಕ್ಲಾಸ್ 10 ಪರೀಕ್ಷೆ
3. ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಓಪನ್ ಸ್ಕೂಲಿಂಗ್ (ಎನ್.ಐ.ಓ.ಎಸ್.) ವತಿಯಿಂದ ನಡೆಸುವ ಪ್ರೌಢ ಶಿಕ್ಷಣ ಮಟ್ಟದ ಕೋರ್ಸ್
4. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಪ್ರೌಢ ಶಿಕ್ಷಣ ಮಟ್ಟದ ಕೋರ್ಸ್ (ಕೆ.ಓ.ಎಸ್.)

**ಕರ್ನಾಟಕ ಪದವಿ ಪೂರ್ವ ಶಿಕ್ಷಣ ಮಂಡಳಿಯು ನಡೆಸುವ ಪಿ.ಯು.ಸಿ. ವಿದ್ಯಾರ್ಹತೆಯ ತತ್ಸಮಾನ ವಿದ್ಯಾರ್ಹತೆಗಳು**

1. ಸಿ.ಬಿ.ಎಸ್.ಇ. ಮತ್ತು ಐ.ಎಸ್.ಸಿ. ಮಂಡಳಿಯು ನಡೆಸುವ ಕ್ಲಾಸ್ 12 ಪರೀಕ್ಷೆ
2. ಇತರೆ ರಾಜ್ಯ ಸರ್ಕಾರದ ಪರೀಕ್ಷಾ ಮಂಡಳಿಗಳಿಂದ ನಡೆಸುವ ಕ್ಲಾಸ್ 12 ಪರೀಕ್ಷೆ
3. ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಓಪನ್ ಸ್ಕೂಲಿಂಗ್ (ಎನ್.ಐ.ಓ.ಎಸ್.) ವತಿಯಿಂದ ನಡೆಸುವ ಉನ್ನತ ಪ್ರೌಢ ಶಿಕ್ಷಣ ಕೋರ್ಸ್/ಹೆಚ್.ಎಸ್.ಸಿ.
4. ಮೂರು ವರ್ಷಗಳ ಡಿಪ್ಲೊಮಾ ಅಥವಾ ಎರಡು ವರ್ಷಗಳ ಐ.ಟಿ.ಐ ಕೋರ್ಸ್ ಅಥವಾ ಎರಡು ವರ್ಷಗಳ ವೃತ್ತಿ ಶಿಕ್ಷಣ ಡಿಪ್ಲೊಮಾ (ಜೆ.ಓ.ಸಿ/ಜೆ.ಓ.ಡಿ.ಸಿ/ಜೆ.ಎಲ್.ಡಿ.ಸಿ) ಅಭ್ಯರ್ಥಿಗಳು ಎನ್.ಐ.ಓ.ಎಸ್. ನ ವತಿಯಿಂದ ನಡೆಸುವ ಒಂದು ಭಾಷಾ ಕೋರ್ಸ್ ಮತ್ತು ಒಂದು ಶೈಕ್ಷಣಿಕ ವಿಷಯದಲ್ಲಿ (ದೂರಕಲಿಕೆ ಮಾದರಿಯಲ್ಲಿ) ಅಥವಾ ಪದವಿಪೂರ್ವ ಮಂಡಳಿಯು ನಡೆಸುವ ಪರೀಕ್ಷೆಯಲ್ಲಿ ಒಂದು ಭಾಷೆ ಮತ್ತು ಒಂದು ವಿಷಯದಲ್ಲಿ ಉತ್ತೀರ್ಣರಾದಲ್ಲಿ ಮಾತ್ರ ಪಿ.ಯು.ಸಿ.ಗೆ ತತ್ಸಮಾನವೆಂದು ಪರಿಗಣಿಸಬಹುದು

**ಪದವಿ ವಿದ್ಯಾರ್ಹತೆಯ ತತ್ಸಮಾನ ವಿದ್ಯಾರ್ಹತೆಗಳು**

1. ಯುಜಿಸಿಯಿಂದ ಮಾನ್ಯತೆ ಹೊಂದಿರುವ ಪರಿಗಣಿತ ವಿಶ್ವವಿದ್ಯಾಲಯಗಳು, ಖಾಸಗಿ/ಡೀಮ್ಡ್ ಹಾಗೂ ಹೊರರಾಜ್ಯದ ವಿಶ್ವವಿದ್ಯಾಲಯಗಳಿಂದ ಪಡೆದ ಪದವಿಗಳು. ಆದರೆ, ವಿಶ್ವವಿದ್ಯಾಲಯಗಳ ಪದವಿಯ ತತ್ಸಮಾನದ (equivalence of degree) ಬಗ್ಗೆ ಶಿಕ್ಷಣಕ್ಕೆ ಸಂಬಂಧಿಸಿದಂತೆ ಆಯಾ ವಿಶ್ವವಿದ್ಯಾಲಯ ಮತ್ತು ಉದ್ಯೋಗಕ್ಕೆ ಸಂಬಂಧಿಸಿದಂತೆ ಉದ್ಯೋಗ ನೀಡುವ ಪ್ರಾಧಿಕಾರ ತೀರ್ಮಾನ ತೆಗೆದುಕೊಳ್ಳಬೇಕಾಗುತ್ತದೆ.
2. ಅಂಚೆ ಮತ್ತು ದೂರ ಶಿಕ್ಷಣದ ಮುಖಾಂತರ ಪಡೆದಿರುವ ಪದವಿಗಳು. ಆದರೆ, ನಿಯಮಬಾಹಿರವಾಗಿ ಕೆಲವು ವಿಶ್ವವಿದ್ಯಾಲಯಗಳು ಯು.ಜಿ.ಸಿ. ಯ ಅನುಮೋದನೆ ಇಲ್ಲದೆ ನಡೆಸುತ್ತಿರುವ ಅಂಚೆ ಮತ್ತು ದೂರ ಶಿಕ್ಷಣದ ಕೋರ್ಸುಗಳನ್ನು ಹಾಗೂ ಅಂಚೆ ಮತ್ತು ದೂರ ಶಿಕ್ಷಣದ ಮುಖಾಂತರ ಪಡೆದ ತಾಂತ್ರಿಕ ಪದವಿಗಳನ್ನು ನೇಮಕಾತಿಗೆ ಪರಿಗಣಿಸುವಂತಿಲ್ಲ.

3...

4) ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ದಿನಾಂಕ: 27.01.2015 ರ ಸುತ್ತೋಲೆ ಸಂಖ್ಯೆ: ಸಿಆಸುಇ 147 ಸೇಅನೇ 2014 ನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಿಂಪಡೆಯಲಾಗಿದೆ ಮತ್ತು ಸದರಿ ಸುತ್ತೋಲೆಯನ್ನು ಆಧರಿಸಿ ಇನ್ನು ಮುಂದೆ ಯಾವುದೇ ನೇಮಕಾತಿಯನ್ನು ಮಾಡತಕ್ಕದ್ದಲ್ಲವೆಂದು ಸೂಚಿಸಲಾಗಿದೆ.

Gayathri. M.R
27.02.16

(ಗಾಯತ್ರಿ ಎಂ.ಆರ್.)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1)

ಗೆ,

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ ಇವರಿಗೆ - ಇದನ್ನು ರಾಜ್ಯಪತ್ರದಲ್ಲಿ ಪ್ರಕಟಿಸಿ ಅದರ 200 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಸೇವಾ ನಿಯಮಗಳು-1, ಕೊಠಡಿ ಸಂಖ್ಯೆ: 31, ವಿಧಾನ ಸೌಧ, ಬೆಂಗಳೂರು ಇವರಿಗೆ ಕಳುಹಿಸಿಕೊಡಲು ಕೋರಿದೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ)/(ಇ&ಆರ್ಎಸ್-ಎ)/(ಎ&ಇ).
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಹಾಗೂ ಅಭಿವೃದ್ಧಿ ಆಯುಕ್ತರು.
5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
6. ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು.
7. ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು.
8. ಎಲ್ಲಾ ಇಲಾಖಾ ಮುಖ್ಯಸ್ಥರು.
9. ಎಲ್ಲಾ ಪ್ರಾದೇಶಿಕ ಆಯುಕ್ತರು.
10. ಎಲ್ಲಾ ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
11. *ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು, ಬೆಂಗಳೂರು.
12. *ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
13. *ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು-9.
14. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
15. *ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬಹುಮಹಡಿ ಕಟ್ಟಡ, ಬೆಂಗಳೂರು.
16. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು.
17. ಎಲ್ಲಾ ಸಚಿವರ/ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿಗಳು
18. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ್, ಚಾಣಕ್ಯಪುರಿ, ನವದೆಹಲಿ-110 011.
19. ಸಚಿವಾಲಯದ ಎಲ್ಲಾ ಶಾಖೆಗಳು.
20. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು.
21. ವಾರದ ರಾಜ್ಯಪತ್ರ.
22. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.

(*ಮುಖಪತ್ರದೊಂದಿಗೆ)